# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1087 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ |
| ಉತ್ತರಿಸಬೇಕಾದ ದಿನಾಂಕ | : | 23.02.2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ/ ಬಾಲಕಿಯರ ವಸತಿ ನಿಲಯಗಳಲ್ಲಿ ನಿಗದಿ ಪಡಿಸಿರುವ ದಾಖಲಾತಿ ಸಂಖ್ಯೆ ಎಷ್ಟು: | ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳಲ್ಲಿ ದಾಖಲಾತಿ ಸಂಖ್ಯೆಯನ್ನು ನಿಗಧಿಪಡಿಸಿರುವುದಿಲ್ಲ. ಮಂಜೂರಾತಿ ಸಂಖ್ಯೆಯನ್ನು ಮಾತ್ರ ನಿಗಧಿಪಡಿಸಲಾಗಿರುತ್ತದೆ.<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿಯ 503 ವಸತಿ ಶಾಲಾ/ಕಾಲೇಜುಗಳು ಹಾಗೂ 156 ಪರಿಶಿಷ್ಟ ವರ್ಗಗಳ ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br>ಈ ಪೈಕಿ ಪರಿಶಿಷ್ಟ ಜಾತಿಯ 503 ವಸತಿ ಶಾಲಾ/ ಕಾಲೇಜುಗಳಲ್ಲಿ 6 ರಿಂದ 12 ತರಗತಿ ವರೆಗೆ ಒಟ್ಟು 47825 ಬಾಲಕರು ಹಾಗೂ 84435 ಬಾಲಕಿಯರ ದಾಖಲಾತಿಗೆ ಅವಕಾಶ ಕಲ್ಪಿಸಲಾಗಿದೆ.<br>ಈ ಪೈಕಿ ಪರಿಶಿಷ್ಟ ವರ್ಗದ 156 ವಸತಿ ಶಾಲೆ/ಕಾಲೇಜುಗಳಲ್ಲಿ 6 ರಿಂದ 12 ತರಗತಿ ವರೆಗೆ ಒಟ್ಟು 13620 ಬಾಲಕರು ಹಾಗೂ 27870 ಬಾಲಕಿಯರ ದಾಖಲಾತಿಗೆ ಅವಕಾಶ ಕಲ್ಪಿಸಲಾಗಿದೆ. |
| ಆ) | ಈ ವಸತಿ ಶಾಲೆಗಳಲ್ಲಿ ದಾಖಲಾತಿಗಳನ್ನು ಆನ್‌ಲೈನ್ ಮೂಲಕ ನಡೆಸುತ್ತಿದ್ದು, ಕೆಲವೊಂದು ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಸಿಕೊಳ್ಳಲು ಅಧಿಕಾರಿಗಳು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | 1. ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013ರ ನಿರ್ದೇಶನದಂತೆ, ಸಮಾಜ ಕಲ್ಯಾಣ ಇಲಾಖೆಯ ಪರಿಶಿಷ್ಟ ಜಾತಿ/ಪಂಗಡಗಳ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ಹಾಸ್ಟಲ್ ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ.<br>2. ಹೆಚ್ಚುವರಿಯಾಗಿ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಮತ್ತೊಂದು ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒಳಗೊಂಡ ಹೆಚ್ಚುವರಿ ಕಟ್ಟಡವನ್ನು ಪಡೆದು ನಿಲಯಾರ್ಥಿಗಳಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ.<br>3. ಸರ್ಕಾರದ ಆದೇಶ ಸಂಖ್ಯೆ:ಸಕಇ 160 ಪಕವಿ 2018 ದಿನಾಂಕ:25-08-2018ರನ್ವಯ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಡೆಸಲಾಗುತ್ತಿರುವ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಶೇಕಡಾ.75ರಷ್ಟು ಪರಿಶಿಷ್ಟ |

| | | |
|---|---|---|
| | | 4. ಜಾತಿ ವಿದ್ಯಾರ್ಥಿಗಳಿಗೆ ಹಾಗೂ ಶೇಕಡಾ 25ರಷ್ಟು ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.<br>ಆದರೆ ಇಲಾಖಾ ವತಿಯ ವಿದ್ಯಾರ್ಥಿನಿಲಯಗಳಿಗೆ ನಿಯಮಾನುಸಾರ ಶೇಕಡಾ 75 ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಿದ ನಂತರದಲ್ಲಿ ಇನ್ನು ಶೇಕಡಾ 25ರಷ್ಟು ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.<br>ಆದ್ದರಿಂದ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಇಲಾಖಾ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾವಕಾಶ ಪಡೆಯುವಲ್ಲಿ ವಂಚಿತರಾಗಿರುತ್ತಾರೆಯೇ ಹೊರತು ಸಂಬಂಧಪಟ್ಟ ಇಲಾಖೆಗಳಿಂದ ನಡೆಸಲಾಗುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾವಕಾಶ ಪಡೆಯಬಹುದಾಗಿರುತ್ತದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಿಗೆ 6ನೇ ತರಗತಿಗೆ ಪ್ರವೇಶಾತಿ ಕಲ್ಪಿಸಲು ಸರ್ಕಾರದ ಆದೇಶ ಸಂಖ್ಯೆ;ಸಕಇ 94 ಮೊದೇಶಾ-2020, ದಿನಾಂಕ:12.11.2021 ರನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪ್ರವೇಶ ಪರೀಕ್ಷೆಗೆ ಆನ್ ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿ, ಪ್ರವೇಶ ಪರೀಕ್ಷೆ ನಡೆಸಿ, ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ, ಅಭ್ಯರ್ಥಿಗಳು ಗಳಿಸಿದ ಅಂಕ ಮತ್ತು ಮೀಸಲಾತಿಯನ್ವಯ Seat Matrix ಸಿದ್ಧಪಡಿಸಿ, ಗಣಕೀಕೃತ ಸ್ವಯಂ ಅರ್ಹತಾ ಅಭ್ಯರ್ಥಿಯ ಆಯ್ಕೆ ಮೂಲಕ ಪಾರದರ್ಶಕವಾಗಿ ಸೀಟು ಹಂಚಿಕೆಯನ್ನು ಮಾಡಲಾಗುತ್ತಿದೆ. ಅಭ್ಯರ್ಥಿಯು ಸೇರ ಬಯಸುವ ವಸತಿ ಶಾಲೆಗಳ ಶಾಲಾವಾರು ಆಧ್ಯತೆ ಮೇರೆಗೆ ದಾಖಲಾತಿ ನೀಡಲಾಗುವುದು. |

ಸಕಇ 79 ಎಂಡಿಎಸ್ 2024

(ಡಾ||ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು